**ಕರ್ನಾಟಕ ಸರ್ಕಾರ**
**ಸಹಕಾರ ಚುನಾವಣಾ ಪ್ರಾಧಿಕಾರ**

ಸಂಖ್ಯೆ: ಸಚುಪ್ರಾ/ಚು.ಅ.ನೇ/03/2016

3ನೇ ಮಹಡಿ, ಟಿ.ಟಿ.ಎಂ.ಸಿ.ಕಟ್ಟಡ "ಎ"ಬ್ಲಾಕ್,
ಶಾಂತಿನಗರ, ಬೆಂಗಳೂರು-560027
ದಿನಾಂಕ:22.07.2016.

**ವಿಷಯ:** ಕರ್ನಾಟಕ ಸಹಕಾರ ಸಂಘಗಳ ಅಧಿನಿಯಮ, 1959 ಮತ್ತು ನಿಯಮಗಳು 1960ರ ನಿಯಮ 2(ಐ-1) ಮತ್ತು 13ಬಿಬಿ ಹಾಗೂ ಕರ್ನಾಟಕ ಸೌಹಾರ್ದ ಸಹಕಾರಿ ನಿಯಮಗಳ ನಿಯಮ2(ಜಿ-2)ರಂತೆ ದಿನಾಂಕ 01.10.2016 ರಿಂದ 31.12.2016ರ ವರೆಗೆ ಪದಾವಧಿ ಮುಗಿಯಲಿರುವ ಜಿಲ್ಲೆ/ ಪ್ರಾಂತ್ಯ/ ರಾಜ್ಯ ಕಾರ್ಯವ್ಯಾಪ್ತಿ ಹೊಂದಿರುವ ಎಲ್ಲಾ ರೀತಿಯ ಪ್ರಾಥಮಿಕ ಸಹಕಾರ ಸಂಘಗಳ/ ಸಹಕಾರಿಗಳ ಚುನಾವಣೆ ನಡೆಸಲು ಚುನಾವಣಾಧಿಕಾರಿಗಳನ್ನು ನೇಮಕಾತಿ ಮಾಡುವ ಬಗ್ಗೆ.

**ಉಲ್ಲೇಖ:**
1. ಸರ್ಕಾರದ ಪತ್ರ ಸಂಖ್ಯೆ: ಸಿಒ 217 ಸಿಎಲ್ಎಂ 2015 ದಿನಾಂಕ 7.12.2015 ಮತ್ತು ಸಹಕಾರ ಸಂಘಗಳ ನಿಬಂಧಕರ ಪತ್ರ ಸಂಖ್ಯೆ: ಆರ್ಎಸ್ಆರ್/ಎಕ್ಸ್ಎಂಸಿ/ಚುನ.ನೇ/124/2015-16 ದಿನಾಂಕ 08.12.2015
2. ಸಹಕಾರ ಚುನಾವಣಾ ಪ್ರಾಧಿಕಾರದ ಆದೇಶ ಸಂಖ್ಯೆ:ಸಚುಪ್ರಾ/ ಚು.ಅ.ನೇ/ 03/2016 ದಿನಾಂಕ 18.12.2015 ಮತ್ತು 28.04.2016

★★★

**ಪ್ರಸ್ತಾವನೆ:**

ಕರ್ನಾಟಕ ಸಹಕಾರ ಸಂಘಗಳ ನಿಯಮಗಳು 1960ರ ನಿಯಮ 13ಬಿಬಿ ರಂತೆ. ಮೊದಲನೇ ಹಂತದ ಪ್ರಾಥಮಿಕ ಸಹಕಾರ ಸಂಘಗಳ/ಸಹಕಾರಿಗಳ ಮಂಡಲಿಯ ಸದಸ್ಯರ, ಸಾಮಾನ್ಯ, ಖಾಲಿಬಿದ್ದ ಸ್ಥಾನ ಮತ್ತು ಹೊಸದಾಗಿ ನೋಂದಣಿಯಾದ ಸಹಕಾರ ಸಂಘಗಳು/ಸಹಕಾರಿಗಳ ಚುನಾವಣೆಯನ್ನು ನಡೆಸಲು ಚುನಾವಣಾ ಪ್ರಾಧಿಕಾರವು ಪ್ರತಿ ಜಿಲ್ಲೆಗೆ ಮತ್ತು ಪ್ರಾಂತಕ್ಕೆ ಹಾಗೂ ರಾಜ್ಯಕ್ಕೆ ದಿನಾಂಕ 01.01.2016 ರಿಂದ 30.09.2016ರವರೆಗೆ ಉಲ್ಲೇಖ(2)ರ ಆದೇಶಗಳಲ್ಲಿ ಚುನಾವಣಾಧಿಕಾರಿಗಳನ್ನು ನೇಮಕಾತಿ ಮಾಡಲಾಗಿದೆ.

ಮುಂದುವರೆದು, 2016ನೇ ಸಾಲಿನಲ್ಲಿ ಅಕ್ಟೋಬರ್ 01.10.2016 ರಿಂದ 31.12.2016ರವರೆಗೆ ಆಡಳಿತ ಮಂಡಲಿ ಪದಾವಧಿ ಮುಕ್ತಾಯವಾಗಲಿರುವ ಮೊದಲನೇ ಹಂತದ ಪ್ರಾಥಮಿಕ ಸಹಕಾರ ಸಂಘಗಳ/ಸಹಕಾರಿಗಳ ಮಂಡಲಿಯ ಸದಸ್ಯರ, ಸಾಮಾನ್ಯ, ಖಾಲಿಬಿದ್ದ ಸ್ಥಾನ ಮತ್ತು ಹೊಸದಾಗಿ ನೋಂದಣಿಯಾದ ಸಹಕಾರ ಸಂಘಗಳಿಗೆ/ಸಹಕಾರಿಗಳಿಗೆ ಚುನಾವಣೆ ತತ್ಪರಿಣಾಮ ಪದಾಧಿಕಾರಿಗಳ ಚುನಾವಣೆ ನಡೆಸಲು ಚುನಾವಣಾಧಿಕಾರಿಗಳನ್ನು ನೇಮಿಸಬೇಕಾಗಿರುತ್ತದೆ. ಈ ಹಿನ್ನಲೆಯಲ್ಲಿ ಕರ್ನಾಟಕ ಸಹಕಾರ ಸಂಘಗಳ ನಿಯಮಗಳಲ್ಲಿ ದತ್ತವಾಗಿರುವ ಅಧಿಕಾರದನ್ವಯ ಉಲ್ಲೇಖ(1)ರಲ್ಲಿ ಸರ್ಕಾರ/ನಿಬಂಧಕರಿಂದ ಸ್ಪಷ್ಟೀಕರಿಸಲ್ಪಟ್ಟ ಅಧಿಕಾರಿಗಳನ್ನು ಜಿಲ್ಲಾ/ಪ್ರಾಂತ್ಯ/ರಾಜ್ಯ ಚುನಾವಣಾಧಿಕಾರಿಗಳನ್ನಾಗಿ ಸದ್ಯಕ್ಕೆ 03 ತಿಂಗಳ ಅವಧಿಗೆ ನೇಮಕಾತಿ ಮಾಡುವುದು ಸೂಕ್ತವೆಂದು ಅಭಿಪ್ರಾಯಕ್ಕೆ ಬರಲಾಯಿತು.

ಕರ್ನಾಟಕ ಸಹಕಾರ ಸಂಘಗಳ ತಿದ್ದುಪಡಿ ನಿಯಮಗಳು 2015ರ ನಿಯಮ 2(ಐ-1) ಮತ್ತು ನಿಯಮ 13ಬಿಬಿ ಹಾಗೂ ಸೌಹಾರ್ದ ಸಹಕಾರಿ ತಿದ್ದುಪಡಿ ನಿಯಮ 2015 ನಿಯಮ2(ಜಿ-2)ಗಳಂತೆ ಜಿಲ್ಲಾ/ಪ್ರಾಂತ್ಯ/ರಾಜ್ಯ ಚುನಾವಣಾಧಿಕಾರಿಗಳಾಗಿ ಮೊದಲನೇ ಹಂತದ ಪ್ರಾಥಮಿಕ ಸಹಕಾರ ಸಂಘಗಳ/ಸಹಕಾರಿಗಳ ಆಡಳಿತ ಮಂಡಳಿಯ ಸಾಮಾನ್ಯ ಚುನಾವಣೆ ಮತ್ತು ಪದಾಧಿಕಾರಿಗಳ ಚುನಾವಣೆ, ಹೊಸದಾಗಿ ನೋಂದಣಿಯಾದ, ಆಕಸ್ಮಿಕವಾಗಿ ತೆರವಾದ

ಮತ್ತು ಆಡಳಿತಗಾರ /ವಿಶೇಷಾಧಿಕಾರಿ ನೇಮಕಗೊಂಡ ಸಹಕಾರ ಸಂಘ/ಸಹಕಾರಿಗಳ ಚುನಾವಣೆಗಳನ್ನು ನಡೆಸಲು ಚುನಾವಣಾಧಿಕಾರಿಗಳನ್ನು ನೇಮಕಾತಿ ಮಾಡಿ ಈ ಕೆಳಕಂಡ ಆದೇಶ ಹೊರಡಿಸಲಾಗಿದೆ.

**ಆದೇಶ**

**ಸಂಖ್ಯೆ: ಸಚುಪ್ರಾ/ಚು.ಅ.ನೇ/03/2016** **ದಿನಾಂಕ: 22.07.2016** 29

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ,ಕರ್ನಾಟಕ ಸಹಕಾರ ಸಂಘಗಳ ತಿದ್ದುಪಡಿ ನಿಯಮಗಳ 2015 ರ ನಿಯಮ 2(ಐ-1) ಹಾಗೂ ಕರ್ನಾಟಕ ಸೌಹಾರ್ದ ಸಹಕಾರಿ ತಿದ್ದುಪಡಿ ನಿಯಮಗಳ 2015ರ ನಿಯಮ 2(ಜಿ-2) ಮತ್ತು ನಿಯಮ 13ಬಿಬಿ ರಂತೆ ಚುನಾವಣಾ ಪ್ರಾಧಿಕಾರಕ್ಕೆ ದತ್ತವಾಗಿರುವ ಅಧಿಕಾರವನ್ನು ಚಲಾಯಿಸಿ, ಎನ್.ಸಿ. ಮುನಿಯಪ್ಪ, ಆಯುಕ್ತರು, ಸಹಕಾರ ಚುನಾವಣಾ ಪ್ರಾಧಿಕಾರ, ಬೆಂಗಳೂರು ಆದ ನಾನು ಮೊದಲನೇ ಹಂತದ ಪ್ರಾಥಮಿಕ ಸಹಕಾರ ಸಂಘಗಳ/ಸಹಕಾರಿಗಳ ಆಡಳಿತ ಮಂಡಳಿಯ ಸಾಮಾನ್ಯ ಚುನಾವಣೆ ಮತ್ತು ಪದಾಧಿಕಾರಿಗಳ ಚುನಾವಣೆ, ಹೊಸದಾಗಿ ನೋಂದಣಿಯಾದ ಸಹಕಾರ ಸಂಘ/ಸಹಕಾರಿಗಳ ಚುನಾವಣೆ, ಆಕಸ್ಮಿಕವಾಗಿ ತೆರವಾದ ಮತ್ತು ಆಡಳಿತಗಾರ/ವಿಶೇಷಾಧಿಕಾರಿ ನೇಮಕಗೊಂಡ ಸಹಕಾರ ಸಂಘ/ಸಹಕಾರಿಗಳ ಚುನಾವಣೆಗಳನ್ನು ನಡೆಸಲು ಈ ಕೆಳಕಂಡ ಅಧಿಕಾರಿಗಳನ್ನು ಜಿಲ್ಲಾ/ಪ್ರಾಂತ್ಯ/ರಾಜ್ಯ ಚುನಾವಣಾಧಿಕಾರಿಗಳನ್ನಾಗಿ ದಿನಾಂಕ 01.10.2016 ರಿಂದ 31.12.2016ರ ರವರೆಗೆ ನೇಮಕಾತಿ ಮಾಡಿ ಆದೇಶಿಸಿರುತ್ತೇನೆ.

| ಕ್ರ ಸಂ. | ಜಿಲ್ಲಾ / ಪ್ರಾಂತ್ಯ / ರಾಜ್ಯ ಚುನಾವಣಾಧಿಕಾರಿಯಾಗಿ ನೇಮಕಗೊಳಿಸಲ್ಪಟ್ಟ ಅಧಿಕಾರಿ | ಚುನಾವಣಾಧಿಕಾರಿಯ ವ್ಯಾಪ್ತಿಗೆ ಬರುವ ಸಹಕಾರ ಸಂಘಗಳು / ಸೌಹಾರ್ದ ಸಹಕಾರಿಗಳು |
|---|---|---|
| 1) | ಎಲ್ಲಾ ಜಿಲ್ಲಾ ಸಹಕಾರ ಸಂಘಗಳ ಉಪನಿಬಂಧಕರು (ಬೆಂಗಳೂರು ನಗರದ ಉಪನಿಬಂಧಕರುಗಳು ಸೇರಿದಂತೆ) | ಆಯಾ ಜಿಲ್ಲೆಯಲ್ಲಿರುವ ತಾಲ್ಲೂಕು ಮಟ್ಟಕ್ಕಿಂತ ಕಡಿಮೆ ಕಾರ್ಯವ್ಯಾಪ್ತಿ ಹೊಂದಿರುವ ಪ್ರಾಥಮಿಕ ಸಹಕಾರ ಸಂಘಗಳು/ಪಟ್ಟಣ ಸಹಕಾರ ಬ್ಯಾಂಕುಗಳು/ ಸೌಹಾರ್ದ ಸಹಕಾರಿಗಳು / ಸೌಹಾರ್ದ ಸಹಕಾರಿ ಬ್ಯಾಂಕುಗಳು |
| 2) | ಎಲ್ಲಾ ಪ್ರಾಂತೀಯ ಸಹಕಾರ ಸಂಘಗಳ ಜಂಟಿ ನಿಬಂಧಕರು (ಬೆಂಗಳೂರು ನಗರ ಜಿಲ್ಲೆ ಹೊರತುಪಡಿಸಿ) | ತಾಲ್ಲೂಕು ಮಟ್ಟ ಹಾಗೂ ಜಿಲ್ಲಾ ಮಟ್ಟಕ್ಕಿಂತ ಕಡಿಮೆ ಕಾರ್ಯವ್ಯಾಪ್ತಿ ಹೊಂದಿರುವ ಪ್ರಾಥಮಿಕ ಸಹಕಾರ ಸಂಘಗಳು, ಸೌಹಾರ್ದ ಸಹಕಾರಿಗಳು, ಪಟ್ಟಣ ಸಹಕಾರ ಬ್ಯಾಂಕುಗಳು ಮತ್ತು ಸೌಹಾರ್ದ ಸಹಕಾರಿ ಬ್ಯಾಂಕುಗಳು. |
| 3) | ಸಹಕಾರ ಸಂಘಗಳ ಜಂಟಿ ನಿಬಂಧಕರು, ಬೆಂಗಳೂರು ಪ್ರಾಂತ (ಬೆಂಗಳೂರು ನಗರ ಜಿಲ್ಲೆಗೆ ಸಂಬಂಧಿಸಿದಂತೆ) | ಬೆಂಗಳೂರು ನಗರ ತಾಲ್ಲೂಕು ಮಟ್ಟ ಕಾರ್ಯವ್ಯಾಪ್ತಿ ಹೊಂದಿರುವ ಪ್ರಾಥಮಿಕ ಸಹಕಾರ ಸಂಘಗಳು, ಸೌಹಾರ್ದ ಸಹಕಾರಿಗಳು, ಪಟ್ಟಣ ಸಹಕಾರ ಬ್ಯಾಂಕುಗಳು ಮತ್ತು ಸೌಹಾರ್ದ ಸಹಕಾರಿ ಬ್ಯಾಂಕುಗಳು. |
| 4) | ಸಹಕಾರ ಸಂಘಗಳ ಜಂಟಿ ನಿಬಂಧಕರು (ಪಟ್ಟಣ ಬ್ಯಾಂಕುಗಳ ವಿಭಾಗ), ಕೇಂದ್ರ ಕಛೇರಿ, ಬೆಂಗಳೂರು. (ಬೆಂಗಳೂರು ಮತ್ತು ಮೈಸೂರು ಪ್ರಾಂತ್ಯಕ್ಕೆ ಸಂಬಂಧಿಸಿದಂತೆ) | ಜಿಲ್ಲಾ ಮಟ್ಟ ಹಾಗೂ ಜಿಲ್ಲಾ ಮಟ್ಟಕ್ಕಿಂತ ಮೇಲ್ಪಟ್ಟ ಕಾರ್ಯವ್ಯಾಪ್ತಿ ಹೊಂದಿರುವ ಕೃಷಿಯೇತರ ಪತ್ತಿನ ಸಹಕಾರ ಸಂಘಗಳು /ಪಟ್ಟಣ ಸಹಕಾರ ಬ್ಯಾಂಕುಗಳು<br>ಬೆಂಗಳೂರು ನಗರ ಜಿಲ್ಲೆಗೆ ಸಂಬಂಧಿಸಿದಂತೆ ತಾಲ್ಲೂಕು ಮಟ್ಟಕ್ಕೆ ಮೇಲ್ಪಟ್ಟು ರಾಜ್ಯಮಟ್ಟದವರೆಗಿನ ಕೃಷಿಯೇತರ ಪತ್ತಿನ ಸಹಕಾರ ಸಂಘಗಳು /ಪಟ್ಟಣ ಸಹಕಾರ ಬ್ಯಾಂಕುಗಳು |

| | | |
|---|---|---|
| 5) | ಸಹಕಾರ ಸಂಘಗಳ ಅಪರ ನಿಬಂಧಕರು, ಕಾಡಾ, ಬೆಳಗಾವಿ (ಸರ್ಕಾರದ ಅಧಿಸೂಚನೆ ಸಂಖ್ಯೆ:ಸಇ/425/ಎಸಸೇ/2015,ದಿ:05/03/ 2016ರಲ್ಲಿ ಜಂಟಿ ನಿಬಂಧಕರ ಹುದ್ದೆಯನ್ನು ಅಪರ ನಿಬಂಧಕರ ಹುದ್ದೆಗೆ ಉನ್ನತೀಕರಣ ಗೊಳಿಸಿದೆ) (ಬೆಳಗಾವಿ ಪ್ರಾಂತಕ್ಕೆ ಸಂಬಂಧಿಸಿದಂತೆ)<br><br>ಸಹಕಾರ ಸಂಘಗಳ ಜಂಟಿ ನಿಬಂಧಕರು, ಕಾಡಾ, ಕಲಬುರಗಿ<br>(ಕಲಬುರಗಿ ಪ್ರಾಂತಕ್ಕೆ ಸಂಬಂಧಿಸಿದಂತೆ) | ಜಿಲ್ಲಾ ಮಟ್ಟ ಹಾಗೂ ಜಿಲ್ಲಾ ಮಟ್ಟಕ್ಕಿಂತ ಮೇಲ್ಪಟ್ಟ ಕಾರ್ಯವ್ಯಾಪ್ತಿ ಹೊಂದಿರುವ ಕೃಷಿಯೇತರ ಪತ್ತಿನ ಸಹಕಾರ ಸಂಘಗಳು / ಪಟ್ಟಣ ಸಹಕಾರ ಬ್ಯಾಂಕುಗಳು, ಸೌಹಾರ್ದ ಸಹಕಾರಿಗಳು ಮತ್ತು ಸೌಹಾರ್ದ ಸಹಕಾರಿ ಬ್ಯಾಂಕುಗಳು. |
| 6 | ಸಹಕಾರ ಸಂಘಗಳ ಜಂಟಿ ನಿಬಂಧಕರು (ಕಾನೂನು ಕೋಶ), ಕೇಂದ್ರ ಕಛೇರಿ, ಬೆಂಗಳೂರು.<br>(ಬೆಂಗಳೂರು ಮತ್ತು ಮೈಸೂರು ಪ್ರಾಂತ್ಯಕ್ಕೆ ಸಂಬಂಧಿಸಿದಂತೆ) | ಜಿಲ್ಲಾ ಮಟ್ಟ ಹಾಗೂ ಜಿಲ್ಲಾ ಮಟ್ಟಕ್ಕಿಂತ ಮೇಲ್ಪಟ್ಟ ಕಾರ್ಯವ್ಯಾಪ್ತಿ ಹೊಂದಿರುವ ಸೌಹಾರ್ದ ಸಹಕಾರಿಗಳು, ಸೌಹಾರ್ದ ಸಹಕಾರಿ ಬ್ಯಾಂಕುಗಳು |
| 7) | ಕೇಂದ್ರ ಕಛೇರಿಯ ಸಹಕಾರ ಸಂಘಗಳ ಅಪರ ನಿಬಂಧಕರು (ಫೆಡರಲ್ ಮತ್ತು ಅಪೆಕ್ಸ್ ಸಹಕಾರ ಸಂಸ್ಥೆಗಳನ್ನು ಹೊರತುಪಡಿಸಿ, ಉಳಿದಂತೆ ಅವರವರ ವ್ಯಾಪ್ತಿಗೆ ಸಂಬಂಧಿಸಿದ ಸಹಕಾರ ಸಂಘಗಳು) | ಜಿಲ್ಲಾ ಮಟ್ಟ ಹಾಗೂ ಜಿಲ್ಲಾ ಮಟ್ಟಕ್ಕಿಂತ ಮೇಲ್ಪಟ್ಟ ಕಾರ್ಯವ್ಯಾಪ್ತಿ ಹೊಂದಿರುವ ಸಹಕಾರ ಸಂಘಗಳು |
| | | ಬೆಂಗಳೂರು ನಗರ ಜಿಲ್ಲೆಗೆ ಸಂಬಂಧಿಸಿದಂತೆ ತಾಲ್ಲೂಕು ಮಟ್ಟಕ್ಕೆ ಮೇಲ್ಪಟ್ಟು ರಾಜ್ಯಮಟ್ಟದವರೆಗಿನ ಕಾರ್ಯವ್ಯಾಪ್ತಿ ಹೊಂದಿರುವ ಸಹಕಾರ ಸಂಘಗಳು |

***ಮೇಲೆ ಪ್ರತ್ಯಾಯೋಜಿಸಲ್ಪಟ್ಟ ಅಧಿಕಾರಿಗಳ ವ್ಯಾಪ್ತಿಗೆ ಒಂದು ವೇಳೆ ಪ್ರತ್ಯಾಯೋಜಿಸಲ್ಪಟ್ಟಿರುವ ಸಹಕಾರ ಸಂಸ್ಥೆಗಳ ಚುನಾವಣಾ ವ್ಯಾಜ್ಯಗಳು ಇತ್ಯರ್ಥಕ್ಕೆ ಬಂದಲ್ಲಿ ಸದರಿ ವ್ಯಾಜ್ಯಗಳನ್ನು ಇತರೆ ಸೂಕ್ತ ಪ್ರಾಧಿಕಾರಕ್ಕೆ ವರ್ಗಾಯಿಸತಕ್ಕದ್ದು ಎಂಬ ಸೂಚನೆಯೊಂದಿಗೆ ಸ್ಪಷ್ಟೀಕರಣ ನೀಡಿರುವಂತೆ ಕ್ರಮವಿಡತಕ್ಕದ್ದು.***

ಚುನಾವಣಾಧಿಕಾರಿಗಳು ಅವರ ಕಾರ್ಯವ್ಯಾಪ್ತಿಗೆ ಬರುವಂತಹ ಸಹಕಾರ ಸಂಘಗಳ/ಸಹಕಾರಿಗಳ ಚುನಾವಣೆಯನ್ನು ಮತ್ತು ತತ್ಪರಿಣಾಮದ ಪದಾಧಿಕಾರಿಗಳ ಚುನಾವಣೆಯನ್ನು ಪ್ರಾಧಿಕಾರದಿಂದ ಕಾಲಕಾಲಕ್ಕೆ ನೀಡಲಾದ ಸುತ್ತೋಲೆ, ಅಧಿಸೂಚನೆ ಮತ್ತು ಮಾರ್ಗಸೂಚಿಗಳನ್ನು ಅನುಸರಿಸಿ ಚುನಾವಣೆಗಳನ್ನು ನಿಯಮಾನುಸಾರ, ಪಾರದರ್ಶಕವಾಗಿ ನಿಷ್ಪಕ್ಷಪಾತದಿಂದ ನಡೆಸಲು ಆದೇಶಿಸಿದೆ.

(ಎನ್.ಸಿ. ಮುನಿಯಪ್ಪ)
**ಆಯುಕ್ತರು,**
**ಸಹಕಾರ ಚುನಾವಣಾ ಪ್ರಾಧಿಕಾರ, ಬೆಂಗಳೂರು**

**ಇವರಿಗೆ:-**

1. ಸಹಕಾರ ಸಂಘಗಳ ಅಪರ ನಿಬಂಧಕರು, (ಪತ್ತು), (ಕೈಗಾರಿಕೆ ಮತ್ತು ಹೈನುಗಾರಿಕೆ), (ವಸತಿ ಮತ್ತು ಇತರೆ), (ಬಳಕೆ ಮತ್ತು ಮಾರಾಟ), ಸಹಕಾರ ಸಂಘಗಳ ನಿಬಂಧಕರ ಕಛೇರಿ, ನಂ.1, ಆಲಿ ಆಸ್ಕರ್ ರಸ್ತೆ, ಬೆಂಗಳೂರು
2. ರಾಜ್ಯದ ಎಲ್ಲಾ ಪ್ರಾಂತೀಯ ಸಹಕಾರ ಸಂಘಗಳ ಜಂಟಿ ನಿಬಂಧಕರು,

3. ಸಹಕಾರ ಸಂಘಗಳ ಜಂಟಿ ನಿಬಂಧಕರು(ಪಟ್ಟಣ ಬ್ಯಾಂಕುಗಳ ವಿಭಾಗ), ಸಹಕಾರ ಸಂಘಗಳ ನಿಬಂಧಕರ ಕಛೇರಿ, ನಂ.1, ಆಲಿ ಆಸ್ಕರ್ ರಸ್ತೆ, ಬೆಂಗಳೂರು
4. ಸಹಕಾರ ಸಂಘಗಳ ಜಂಟಿ ನಿಬಂಧಕರು(ಕಾನೂನು ಕೋಶ), ಸಹಕಾರ ಸಂಘಗಳ ನಿಬಂಧಕರ ಕಛೇರಿ, ನಂ.1, ಆಲಿ ಆಸ್ಕರ್ ರಸ್ತೆ, ಬೆಂಗಳೂರು
5. ಸಹಕಾರ ಸಂಘಗಳ ಜಂಟಿ ನಿಬಂಧಕರು, ಕಾಡಾ, ಬೆಳಗಾವಿ
6. ಸಹಕಾರ ಸಂಘಗಳ ಜಂಟಿ ನಿಬಂಧಕರು, ಕಾಡಾ, ಕಲಬುರಗಿ
7. ರಾಜ್ಯದ ಎಲ್ಲಾ ಜಿಲ್ಲೆಗಳ ಸಹಕಾರ ಸಂಘಗಳ ಉಪನಿಬಂಧಕರು

<u>ಪ್ರತಿಗಳು:-</u>

1. ಮಾನ್ಯ ಸರ್ಕಾರದ ಅಪರ ಪ್ರಧಾನ ಕಾರ್ಯದರ್ಶಿ, ಸಹಕಾರ ಇಲಾಖೆ, ಬಹುಮಹಡಿಗಳ ಕಟ್ಟಡ, 6ನೇ ಮಹಡಿ, ಬೆಂಗಳೂರು-01.
2. ಸಹಕಾರ ಸಂಘಗಳ ನಿಬಂಧಕರು, ಕರ್ನಾಟಕ ರಾಜ್ಯ, ನಂ.1, ಅಲಿ ಆಸ್ಕರ್ ರಸ್ತೆ, ಬೆಂಗಳೂರು-52
3. ಸಹಕಾರ ಸಂಘಗಳ ನಿಬಂಧಕರ ಕಛೇರಿಯ ಎಲ್ಲಾ ಅಪರ ನಿಬಂಧಕರು / ಜಂಟಿ ನಿಬಂಧಕರುಗಳಿಗೆ
4. ರಾಜ್ಯದ ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳಿಗೆ
5. ರಾಜ್ಯದ ಎಲ್ಲಾ ಜಿಲ್ಲೆಗಳ ಆರಕ್ಷಕ ಅಧೀಕ್ಷಕರಿಗೆ
6. ರಾಜ್ಯದ ಎಲ್ಲಾ ಉಪವಿಭಾಗಗಳ ಸಹಕಾರ ಸಂಘಗಳ ಸಹಾಯಕ ನಿಬಂಧಕರುಗಳು,